## ಕರ್ನಾಟಕ ಸರ್ಕಾರದ ನಡಾವಳಿ

ವಿಷಯ : ಉಡುಪಿ ಜಿಲ್ಲೆಯ ಬ್ರಹ್ಮಾವರದ ಸರ್ಕಾರಿ ಪದವಿ ಪೂರ್ವ ಕಾಲೇಜು, ಸರ್ಕಾರಿ ಪದವಿ ಪೂರ್ವ ಕಾಲೇಜು (ಪ್ರೌಢ ಶಾಲಾ ವಿಭಾಗ) ಹಾಗೂ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಗಳನ್ನೊಳಗೊಂಡಂತೆ ಹೆಗ್ಗುಂಜೆ ರಾಜೀವ ಶೆಟ್ಟಿ ಚಾರಿಟಬಲ್ ಸೊಸೈಟಿ, ಬೆಂಗಳೂರು ಇವರ ಸಹಭಾಗಿತ್ವದಲ್ಲಿ ಕರ್ನಾಟಕ ಪಬ್ಲಿಕ್ ಶಾಲೆಯನ್ನು ಪ್ರಾರಂಭಿಸುವ ಬಗ್ಗೆ.

ಓದಲಾಗಿದೆ : 1.ಸರ್ಕಾರದ ಆದೇಶ ಸಂಖ್ಯೆ:ಇಡಿ 04 ಯೋಸಕ 2017, ದಿನಾಂಕ:05.01.2018.

2.ಸರ್ಕಾರದ ಆದೇಶದ ಸಂಖ್ಯೆ: ಇಡಿ 230 ಯೋಸಕ 2018, ಬೆಂಗಳೂರು, ದಿನಾಂಕ:18.05.2019

3.ಸರ್ಕಾರದ ಆದೇಶ ಸಂಖ್ಯೆ: ಇಪಿ 09 ಎಂಪಿಇ 2021, ದಿನಾಂಕ: 04.04.2022.

4.ಸರ್ಕಾರದ ಆದೇಶ ಸಂಖ್ಯೆ: ಇಪಿ 09 ಎಂಪಿಇ 2021, ದಿನಾಂಕ: 13.05.2022

5.ಸರ್ಕಾರದ ಸುತ್ತೋಲೆ ಸಂಖ್ಯೆ: ಇಪಿ 204 ಪಿಎಂಸಿ 2021 ದಿನಾಂಕ:25.10.2021

6.ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರ ಟಿಪ್ಪಣಿ ದಿನಾಂಕ:14.12.2022 .

7.ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ ಇವರ ಪತ್ರ ದಿನಾಂಕ:19.01.2023.

********

### ಪ್ರಸ್ತಾವನೆ:

ಕರ್ನಾಟಕ ಸರ್ಕಾರವು "ಪ್ರತಿ ಮಗುವೂ ಶಾಲೆಯಲ್ಲಿ ಮತ್ತು ಉತ್ತಮ ಕಲಿಕೆಯೊಂದಿಗೆ" ಎಂಬ ಘೋಷ ನೀತಿಯನ್ನು ಅಳವಡಿಸಿಕೊಂಡಿದ್ದು, ಪ್ರತಿ ಮಗುವಿಗೂ ಶಿಕ್ಷಣ ಹಕ್ಕು ಕಾಯ್ದೆ ಅನ್ವಯ ಗುಣಮಟ್ಟದ ಶಿಕ್ಷಣ ನೀಡುವ ಜವಾಬ್ದಾರಿಯನ್ನು ಹೊಂದಿರುತ್ತದೆ. ವಿದ್ಯಾರ್ಥಿಗಳು ಉತ್ತಮವಾಗಿ ಕಲಿಯಲು ಸಹಕರಿಸುವಂತೆ ಶಾಲೆಗಳಲ್ಲಿ ಬೋಧನಾ ಪದ್ಧತಿಯನ್ನು ಸುಧಾರಿಸಲು ಕ್ರಮ ತೆಗೆದುಕೊಳ್ಳಬೇಕಾಗಿದೆ. ಈ ದೂರದೃಷ್ಟಿಯ ಹಿನ್ನೆಲೆಯಲ್ಲಿ, 2017-18ನೇ ಸಾಲಿನ ಆಯವ್ಯಯ ಘೋಷಣೆಯಂತೆ, ಶಿಕ್ಷಕರು ಮತ್ತು ಇತರ ಸಂಪನ್ಮೂಲಗಳ ಬಳಕೆಯ ಸಮರ್ಪಕತೆಯನ್ನು ಸುಧಾರಿಸಲು, ಒಂದೇ ಭೌಗೋಳಿಕ ಸ್ಥಳಗಳಲ್ಲಿ

ಅಸ್ತಿತ್ವದಲ್ಲಿರುವ ಶಾಲೆಗಳನ್ನು ಆಡಳಿತಾತ್ಮಕ, ಶೈಕ್ಷಣಿಕ ಮತ್ತು ಕ್ರಿಯಾತ್ಮಕ ಸಂಯೋಜನೆಯೊಂದಿಗೆ ಒಟ್ಟುಗೂಡಿಸಿ, ತಾಲ್ಲೂಕಿಗೆ ಒಂದರಂತೆ 176 ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಪ್ರಾರಂಭಿಸಲು ಓದಲಾದ (1) ರ ಸರ್ಕಾರದ ಆದೇಶದಲ್ಲಿ ಅನುಮೋದನೆ ನೀಡಲಾಗಿದೆ. ಅದೇ ರೀತಿ, ಓದಲಾದ (2) ರ ಸರ್ಕಾರದ ಆದೇಶದಲ್ಲಿ ರಾಜ್ಯದಾದ್ಯಂತ 100 ಕರ್ನಾಟಕ ಪಬ್ಲಿಕ್ ಶಾಲೆಗಳನ್ನು, ಓದಲಾದ (3)ರ ಸರ್ಕಾರದ ಆದೇಶದಲ್ಲಿ 2021–22 ನೇ ಸಾಲಿಗೆ ಹಾಸನ ಜಿಲ್ಲೆ ವ್ಯಾಪ್ತಿಯಡಿ ಹೊಸದಾಗಿ 05 ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಹಾಗೂ ಓದಲಾದ (4) ರ ಸರ್ಕಾರದ ಆದೇಶದಲ್ಲಿ 02 ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಪ್ರಾರಂಭಿಸಲಾಗಿದೆ. ಈ ರೀತಿಯಾಗಿ ಈವರೆವಿಗೂ ಒಟ್ಟು 283 ಕೆ.ಪಿ.ಎಸ್ ಶಾಲೆಗಳನ್ನು ಪ್ರಾರಂಭಿಸಲಾಗಿದೆ.

ಓದಲಾದ (5) ರ ಸುತ್ತೋಲೆಯಲ್ಲಿ ಸ್ವಯಂ ಸೇವಾ ಸಂಸ್ಥೆಗಳು, ಕಾರ್ಪೋರೇಟ್ ಸಂಸ್ಥೆಗಳು, ಎನ್.ಜಿ.ಒಗಳು ಮತ್ತು ಶಿಕ್ಷಣಾಸಕ್ತ ದಾನಿಗಳು ಹೊಸ ಕೆ.ಪಿ.ಎಸ್ ಶಾಲೆಗಳನ್ನು ಪ್ರಾರಂಭಿಸಲು ಮಾನದಂಡಗಳನ್ನು ನಿಗದಿಪಡಿಸಲಾಗಿದೆ.

ಓದಲಾದ (6) ರ ಟಿಪ್ಪಣಿಯಲ್ಲಿ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಉಡುಪಿ ಜಿಲ್ಲೆಯ ಬ್ರಹ್ಮಾವರದ ಸರ್ಕಾರಿ ಪದವಿ ಪೂರ್ವ ಕಾಲೇಜು, ಸರ್ಕಾರಿ ಪದವಿ ಪೂರ್ವ ಕಾಲೇಜು (ಪ್ರೌಢ ಶಾಲಾ ವಿಭಾಗ) ಹಾಗೂ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯನ್ನೊಳಗೊಂಡಂತೆ ಹೆಗ್ಗುಂಜೆ ರಾಜೀವ ಶೆಟ್ಟಿ ಚಾರಿಟಬಲ್ ಸೊಸೈಟಿ, ಬೆಂಗಳೂರು ಇವರ ಸಹಭಾಗಿತ್ವದಲ್ಲಿ ಕರ್ನಾಟಕ ಪಬ್ಲಿಕ್ ಶಾಲೆಯನ್ನು ಪ್ರಾರಂಭಿಸಲು ಸರ್ಕಾರದ ಆದೇಶ ಹೊರಡಿಸಲು ಸೂಚಿಸಿರುತ್ತಾರೆ.

ಓದಲಾದ (7) ರ ಪತ್ರದಲ್ಲಿ ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ ಇವರು ಉಡುಪಿ ಜಿಲ್ಲೆಯ ಬ್ರಹ್ಮಾವರದ ಸರ್ಕಾರಿ ಪದವಿ ಪೂರ್ವ ಕಾಲೇಜು, ಸರ್ಕಾರಿ ಪದವಿ ಪೂರ್ವ ಕಾಲೇಜು (ಪ್ರೌಢ ಶಾಲಾ ವಿಭಾಗ) ಹಾಗೂ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆ ಈ ಶಾಲೆಗಳು ಸರ್ಕಾರದ ಸುತ್ತೋಲೆ ಸಂಖ್ಯೆ:ಇಪಿ 204 ಪಿಎಂಸಿ 2021, ದಿ:25.10.2021 ರ ಪ್ರಕಾರ ಒಂದೇ ಆವರಣದಲ್ಲಿದ್ದು, ಒಟ್ಟಾರೆಯಾಗಿ 1805 ವಿದ್ಯಾರ್ಥಿಗಳ ದಾಖಲಾತಿಯನ್ನು ಹೊಂದಿರುತ್ತದೆಂದು ಹಾಗೂ ಒಟ್ಟಾರೆಯಾಗಿ ಈ ಶಾಲೆಯು 3.79 ಎಕರೆ ಪ್ರದೇಶವನ್ನು ಹೊಂದಿದ್ದು, ಈ ಶಾಲೆಗಳಿಗೆ ಅಗತ್ಯವಿರುವ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ದಾನಿಗಳು ಸಿದ್ಧರಿರುವುದಾಗಿ ತಿಳಿಸುತ್ತಾ, ಈ ಸಂಬಂಧ ಸದರಿ ಶಾಲೆಯನ್ನು ಕರ್ನಾಟಕ ಪಬ್ಲಿಕ್ ಶಾಲೆಯನ್ನಾಗಿ ಪ್ರಾರಂಭಿಸಲು ಎಲ್ಲಾ ಅರ್ಹತೆ ಹೊಂದಿದ್ದು, ಹೆಗ್ಗುಂಜೆ ರಾಜೀವ ಶೆಟ್ಟಿ ಚಾರಿಟಬಲ್ ಸೊಸೈಟಿ, ಬೆಂಗಳೂರು ಇವರ ಸಹಭಾಗಿತ್ವದಲ್ಲಿ ಕರ್ನಾಟಕ ಪಬ್ಲಿಕ್ ಶಾಲೆಯನ್ನು ಪ್ರಾರಂಭಿಸಲು ಸರ್ಕಾರದ ಆದೇಶ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲ್ಕಂಡ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಪಿ 116 ಎಂಪಿಇ 2022,**

**ಬೆಂಗಳೂರು ದಿನಾಂಕ:25.01.2023**

ಪ್ರಸ್ತಾವನೆಯಲ್ಲಿ ವಿವರಿಸಲಾಗಿರುವ ಅಂಶಗಳ ಹಿನ್ನೆಲೆಯಲ್ಲಿ ಹೆಗ್ಗುಂಜೆ ರಾಜೀವ ಶೆಟ್ಟಿ ಚಾರಿಟಬಲ್ ಸೊಸೈಟಿ, ಬೆಂಗಳೂರು ಇವರ ಸಹಭಾಗಿತ್ವದಲ್ಲಿ ಉಡುಪಿ ಜಿಲ್ಲೆಯ ಬ್ರಹ್ಮಾವರದ ಸರ್ಕಾರಿ ಪದವಿ ಪೂರ್ವ ಕಾಲೇಜು, ಸರ್ಕಾರಿ ಪದವಿ ಪೂರ್ವ ಕಾಲೇಜು (ಪ್ರೌಢ ಶಾಲಾ ವಿಭಾಗ) ಹಾಗೂ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯನ್ನೊಳಗೊಂಡಂತೆ ಕರ್ನಾಟಕ ಪಬ್ಲಿಕ್ ಶಾಲೆಯನ್ನು ಪ್ರಾರಂಭಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಅನುಮೋದನೆ ನೀಡಿ ಆದೇಶಿಸಿದೆ.

I. ಪ್ರಸ್ತಾಪಿತ ಸರ್ಕಾರಿ ಪದವಿ ಪೂರ್ವ ಕಾಲೇಜು, ಸರ್ಕಾರಿ ಪದವಿ ಪೂರ್ವ ಕಾಲೇಜು (ಪ್ರೌಢ ಶಾಲಾ ವಿಭಾಗ) ಹಾಗೂ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯನ್ನೊಳಗೊಂಡಂತೆ ಒಂದೇ ಆವರಣದಲ್ಲಿ ಕರ್ನಾಟಕ ಪಬ್ಲಿಕ್ ಶಾಲೆಯನ್ನು ಪ್ರಾರಂಭಿಸತಕ್ಕದ್ದು.

II. ಹೆಗ್ಗುಂಜೆ ರಾಜೀವ ಶೆಟ್ಟಿ ಚಾರಿಟಬಲ್ ಸೊಸೈಟಿ, ಬೆಂಗಳೂರು ಇವರೊಂದಿಗೆ ಮಾಡಿಕೊಂಡಿರುವ ಒಡಂಬಡಿಕೆಯನ್ವಯ ಸದರಿ ಶಾಲೆಗೆ ಅವಶ್ಯವಿರುವ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಪಡೆಯಲು ಯೋಜನಾ ಬದ್ಧವಾಗಿ ಕ್ರಮವಹಿಸತಕ್ಕದ್ದು.

III. ಸದರಿ ಕರ್ನಾಟಕ ಪಬ್ಲಿಕ್ ಶಾಲೆಯ ಬಲವರ್ಧನೆಗಾಗಿ ಸರ್ಕಾರದಿಂದ ಯಾವುದೇ ಆರ್ಥಿಕ ನೆರವು ಕೋರತಕ್ಕದ್ದಲ್ಲ.

IV. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು ಇವರು "ಕರ್ನಾಟಕ ಪಬ್ಲಿಕ್ ಶಾಲೆ" ಯೋಜನೆಯ ಅನುಷ್ಠಾನ ಹಾಗೂ ನೋಡಲ್ ಅಧಿಕಾರಿಯಾಗಿರುತ್ತಾರೆ. ಇವರು ಕಾಲಕಾಲಕ್ಕೆ ಹೊರಡಿಸುವ ನಿರ್ದೇಶನಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

V. ಸರ್ಕಾರದ ದಿ:25.10.2021ರ ಸುತ್ತೋಲೆರನ್ವಯ ನಿಗದಿಪಡಿಸಿರುವ ಮಾನದಂಡಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

VI. ಸರ್ಕಾರದ ದಿ:25.10.2021 ರ ಸುತ್ತೋಲೆರನ್ವಯ ಕರ್ನಾಟಕ ಪಬ್ಲಿಕ್ ಶಾಲೆಯ ಬಲವರ್ಧನೆಗಾಗಿ ಸ್ಥಳೀಯ ಸಂಘ ಸಂಸ್ಥೆಗಳು, ದಾನಿಗಳು, ಖಾಸಗಿ ಸಂಸ್ಥೆಗಳ ಸಾಮಾಜಿಕ ಹೊಣೆಗಾರಿಕೆ ನಿಧಿ(ಸಿ.ಎಸ್.ಆರ್) ಮೊದಲಾದ ಸಂಪನ್ಮೂಲಗಳ ಸಹಕಾರವನ್ನು ಪಡೆದುಕೊಂಡು ಸದರಿ ಕೆ.ಪಿ.ಎಸ್ ಶಾಲೆಗಳನ್ನು ಅಭಿವೃದ್ಧಿಪಡಿಸತಕ್ಕದ್ದು.

VII. ಪ್ರಸ್ತುತ ಚಾಲನೆಯಲ್ಲಿರುವ ಮಾರ್ಗಸೂಚಿಗಳನ್ವಯ ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಯನ್ನು ರಚಿಸತಕ್ಕದ್ದು.

VIII. ನೂತನ ರಾಷ್ಟ್ರೀಯ ಶಿಕ್ಷಣ ನೀತಿರನ್ವಯ, ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿ ವೃತ್ತಿ ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡಲು ಸ್ಥಳೀಯ ಐ.ಟಿ.ಐ, ಪಾಲಿಟೆಕ್ನಿಕ್, ಇಂಜಿನಿಯರಿಂಗ್ ಕಾಲೇಜು ಹಾಗೂ ಇತರೆ ಸರ್ಕಾರೇತರ ಸಂಸ್ಥೆಗಳ ಸಹಯೋಗದೊಂದಿಗೆ ರಾಷ್ಟ್ರೀಯ ವೃತ್ತಿ ಕೌಶಲ್ಯ ಚೌಕಟ್ಟು ಯೋಜನೆಯನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸತಕ್ಕದ್ದು.

IX. ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಉತ್ಕೃಷ್ಟ ದರ್ಜೆಯ ಸೌಲಭ್ಯಗಳನ್ನೊಳಗೊಂಡ ಮಾದರಿ ಶಾಲೆಯನ್ನಾಗಿ ರೂಪಿಸತಕ್ಕದ್ದು.

X. ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿ ಶೈಕ್ಷಣಿಕ ಮತ್ತು ಆಡಳಿತಾತ್ಮಕ ವಿಷಯಗಳ ಏಕರೂಪತೆಯನ್ನು ತರುವ ನಿಟ್ಟಿನಲ್ಲಿ ಇಲಾಖೆಯು ಹೊರಡಿಸುವ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

25/1/23

**(ಬಿ.ಹೆಚ್ ಗಿರಿಜಾ)**
ವಿಶೇಷಾಧಿಕಾರಿ ಮತ್ತು ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ (ಯೋಜನೆ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ.

**ಇವರಿಗೆ;**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು.
3. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು.
4. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಮಲ್ಲೇಶ್ವರಂ, ಬೆಂಗಳೂರು.
5. ಅಪರ ಆಯುಕ್ತರು, ಕಲ್ಬುರ್ಗಿ ಮತ್ತು ಬೆಳಗಾವಿ ವಿಭಾಗ, ಸಾರ್ವಜನಿಕ ಶಿಕ್ಷಣ ಇಲಾಖೆ.
6. ನಿರ್ದೇಶಕರು, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ನಿರ್ದೇಶನಾಲಯ, ಬೆಂಗಳೂರು.
7. ನಿರ್ದೇಶಕರು, (ಪ್ರಾಥಮಿಕ/ಪ್ರೌಢ), ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
8. ನಿರ್ದೇಶಕರು, ಖಜಾನೆ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯಗೋಪುರ, ಬೆಂಗಳೂರು.

9. ನಿರ್ದೇಶಕರು, ಪ್ರಾದೇಶಿಕ ಆಂಗ್ಲ ಭಾಷಾ ತರಬೇತಿ ಸಂಸ್ಥೆ, ದಕ್ಷಿಣ ಭಾರತ, ಜ್ಞಾನಭಾರತಿ ಆವರಣ, ಬೆಂಗಳೂರು.
10. ಉಪನಿರ್ದೇಶಕರು, ಖಜಾನಾ ಗಣಕ ಕೇಂದ್ರ, #49, ಖನಿಜ ಭವನ, ಬೆಂಗಳೂರು.
11. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
12. ಸರ್ಕಾರದ ಉಪಕಾರ್ಯದರ್ಶಿ–2, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
13. ಸಾಪ್ತಾಹಿಕ ರಾಜ್ಯ ಪತ್ರ/ಶಾಖಾರಕ್ಷಕಡತ/ಹೆಚ್ಚುವರಿ ಪ್ರತಿಗಳು.

**ಪ್ರತಿ ಮಾಹಿತಿಗಾಗಿ.**

1. ಮಾನ್ಯ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬೆಂಗಳೂರು.

********